152ಸ್ಟೇ (68)

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಯು.ಬಿ. ವೆಂಕಟೇಶ್ ಇವರು ನಿಯಮ 72ರ ಮೇರೆಗೆ ನೀಡಿರುವ ಸೂಚನೆಗೆ ಸರ್ಕಾರದ ಉತ್ತರ

ವಿಷಯ:

ಕಳೆದ ಐದು ವರ್ಷಗಳಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿರ್ವಹಿಸಿರುವ ಕಾಮಗಾರಿಗಳಲ್ಲಿ ಹಲವು ಕಾಮಗಾರಿಗಳಿಗೆ ಎರಡೆರಡು ಬಾರಿ ಬಿಲ್‌ಗಳು ಪಾವತಿಯಾಗಿದ್ದು, ಇಂತಹ ಕಾಮಗಾರಿಗಳ ಗುಣಮಟ್ಟದ ಕುರಿತು ಹಾಗೂ ಬಿಲ್ ಪಾವತಿಯಲ್ಲಿ ಅಧಿಕಾರಿ/ಸಿಬ್ಬಂದಿ ವರ್ಗದವರ ನಿರ್ಲಕ್ಷತೆಯಿಂದ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟುಮಾಡಿರುವ ಕುರಿತು ಸಂಪೂರ್ಣವಾಗಿ ಚರ್ಚಿಸುವ ಸಲುವಾಗಿ ನಿಯಮ 72 ರಡಿಯಲ್ಲಿ ಮಾನ್ಯ ಉಪ ಮುಖ್ಯ ಮಂತ್ರಿಗಳ ಗಮನ ಸೆಳೆಯ ಬಯಸುತ್ತೇನೆ.

ಉತ್ತರ:

ಕಳೆದ 05 ವರ್ಷಗಳಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿರ್ವಹಿಸಿರುವ ಕಾಮಗಾರಿಗಳಲ್ಲಿ ಹಲವು ಕಾಮಗಾರಿಗಳಿಗೆ ಎರಡೆರಡು ಬಾರಿ ಬಿಲ್ಲು ಪಾವತಿಯಾಗಿರುವ ಬಗ್ಗೆ ಪತ್ರಿಕಾ ಮಾಧ್ಯಮಗಳಲ್ಲಿ ವರದಿಯಾಗಿರುತ್ತದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 2019–20 ರಿಂದ 2022–23ರವರೆಗಿನ ಕಾಮಗಾರಿಗಳಲ್ಲಿನ ಅಕ್ರಮಗಳ ಕುರಿತಾದ ದೂರುಗಳನ್ನು ಕೂಲಂಕಷವಾಗಿ ಪರಿಶೀಲನೆ ಮಾಡಲು ದಿನಾಂಕ: 05.08.2023ರಂದು 04 ತನಿಖಾ ತಂಡಗಳನ್ನು ರಚಿಸಲಾಗಿತ್ತು.

ಮುಂದುವರೆದು, ದಿನಾಂಕ: 25.08.2023ರಂದು ಸರ್ಕಾರವು ಮಾನ್ಯ ನಿವೃತ್ತ ನ್ಯಾಯಮೂರ್ತಿಗಳಾದ ಶ್ರೀ ಹೆಚ್.ಎನ್.ನಾಗಮೋಹನ್ ದಾಸ್ ರವರ ನೇತೃತ್ವದಲ್ಲಿ ಏಕ ಸದಸ್ಯ ವಿಚಾರಣಾ ಆಯೋಗವನ್ನು ರಚಿಸಲಾಗಿದೆ. ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾದ ರಿಟ್ ಅರ್ಜಿ ಸಂಖ್ಯೆ: 27053/2023, ದಿನಾಂಕ: 13.12.2023ರ ದೈನಂದಿನ ಆದೇಶದ ಹಿನ್ನೆಲೆಯಲ್ಲಿ, 04 ತನಿಖಾ ತಂಡಗಳನ್ನು ಹಿಂಪಡೆದು ಎಲ್ಲಾ ಪ್ರಕರಣಗಳನ್ನು ಮಾನ್ಯ ನಿವೃತ್ತ ನ್ಯಾಯಮೂರ್ತಿಗಳಾದ ಶ್ರೀ ಹೆಚ್.ಎನ್.ನಾಗಮೋಹನ್ ದಾಸ್‌ರವರ ನೇತೃತ್ವದಲ್ಲಿ ಏಕ ಸದಸ್ಯ ವಿಚಾರಣಾ ಆಯೋಗದಿಂದ ತನಿಖೆಯನ್ನು ಮುಂದುವರೆಸಲು ಸರ್ಕಾರದ ಆದೇಶ ಸಂಖ್ಯೆ: ನಅಇ 329 ಎಂಎನ್‌ವೈ 2023 (ಇ), ದಿನಾಂಕ: 15–12–2023ರಲ್ಲಿ ಆದೇಶಿಸಲಾಗಿರುತ್ತದೆ.

ಮಾನ್ಯ ನಿವೃತ್ತ ನ್ಯಾಯಮೂರ್ತಿಗಳಾದ ಶ್ರೀ ಹೆಚ್.ಎನ್.ನಾಗಮೋಹನ್ ದಾಸ್‌ರವರ ನೇತೃತ್ವದ ಏಕ ಸದಸ್ಯ ಸದರಿ ವಿಚಾರಣಾ ಆಯೋಗವು ಕಾಮಗಾರಿಗಳಿಗೆ ಎರಡೆರಡು ಬಾರಿ ಬಿಲ್ಲು ಪಾವತಿಯಾಗಿರುವ, ಗುಣಮಟ್ಟ ಮತ್ತು ಬಿಲ್ಲು ಪಾವತಿಯಲ್ಲಿ ಅಧಿಕಾರಿ / ಸಿಬ್ಬಂದಿ ವರ್ಗದವರ ನಿರ್ಲಕ್ಷ್ಯತೆಯಿಂದ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿರುವ ಕುರಿತು ಸಂಪೂರ್ಣ ವಿಚಾರಣೆಯನ್ನು ನಡೆಸಲು ಈಗಾಗಲೇ ಬಿಬಿಎಂಪಿಯಿಂದ ದಾಖಲಾತಿಗಳನ್ನು ಸಲ್ಲಿಸಲಾಗುತ್ತಿರುತ್ತದೆ.

ಒಂದುವೇಳೆ ಎರಡೆರಡು ಬಾರಿ ಬಿಲ್ಲು ಪಾವತಿಯಾಗಿರುವ ಪ್ರಕರಣಗಳು ಕಂಡುಬಂದಲ್ಲಿ ಅಂತಹ ಪ್ರಕರಣಗಳಲ್ಲಿ ಭಾಗಿಯಾದ ಗುತ್ತಿಗೆದಾರರೊಳಗೊಂಡಂತೆ ಅಧಿಕಾರಿಗಳ ಮೇಲೆ ಸರ್ಕಾರದಿಂದ ಕಠಿಣ ಶಿಸ್ತು ಕ್ರಮ ಕೈಗೊಳ್ಳಲಾಗುವುದು.

ಸಂಖ್ಯೆ: ನಅಇ 86 ಎಂಎನ್‌ವೈ 2024 (ಇ)

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ